# ಸಿಬಿಐ ತನಿಖೆಗೆ ರಾಜ್ಯಗಳ ಒಪ್ಪಿಗೆ ಕಡ್ಡಾಯ: ಸುಪ್ರೀಂ

## 'ಇದು ಒಕ್ಕೂಟ ವ್ಯವಸ್ಥೆ ಗೌರವಿಸಲು ಇರುವ ನಿಯಮ'

• **ಪಿಟಿಐ** ನವದೆಹಲಿ

ಹಲವು ರಾಜ್ಯ ಸರ್ಕಾರಗಳು ಕೇಂದ್ರೀಯ ತನಿಖಾ ದಳ (ಸಿಬಿಐ)ದ ತನಿಖೆಗೆ ನೀಡಿದ್ದ 'ಸಾಮಾನ್ಯ ಒಪ್ಪಿಗೆ'ಯನ್ನು ಹಿಂಪಡೆಯುತ್ತಿರುವ ಸಮಯದಲ್ಲೇ ಈ ತನಿಖಾ ಸಂಸ್ಥೆಯು ರಾಜ್ಯಗಳಲ್ಲಿ ತನಿಖೆ ನಡೆಸಲು ಸಂಬಂಧಪಟ್ಟ ರಾಜ್ಯ ಸರ್ಕಾರಗಳ ಅನುಮತಿ ಕಡ್ಡಾಯ ಎಂದು ಸುಪ್ರೀಂಕೋರ್ಟ್ ಮಹತ್ವದ ಆದೇಶ ನೀಡಿದೆ.



'ದೆಹಲಿ ವಿಶೇಷ ಪೊಲೀಸ್ ಎಸ್ಟಾಬ್ಲಿಶ್‌ಮೆಂಟ್ (ಡಿಎಸ್‌ಪಿಇ) ಕಾಯ್ದೆಯ ಸೆಕ್ಷನ್ 5ರಡಿ ಸಿಬಿಐಗೆ ದೆಹಲಿಯ ಹೊರಗೂ ತನಿಖೆ ನಡೆಸಲು ಅಧಿಕಾರವಿದೆ. ಆದರೆ, ಅದೇ ಕಾಯ್ದೆಯ ಸೆಕ್ಷನ್ 6ರಲ್ಲಿ ಬೇರೆ ರಾಜ್ಯಗಳ ವ್ಯಾಪ್ತಿಯಲ್ಲಿ ಸಿಬಿಐ ತನಿಖೆ ನಡೆಸಬೇಕಾದರೆ ಆಯಾ ರಾಜ್ಯಗಳಿಂದ ಅನುಮತಿ ಪಡೆದಿರಬೇಕು ಎಂಬ ನಿಯಮವಿದೆ. ದೇಶದ ಒಕ್ಕೂಟ ವ್ಯವಸ್ಥೆಯನ್ನು ಗೌರವಿಸುವ ದೃಷ್ಟಿಯಿಂದ ಈ ಕಲಂ ಅಳವಡಿಸಲಾಗಿದೆ. ಹೀಗಾಗಿ ರಾಜ್ಯಗಳಲ್ಲಿ ತನಿಖೆ ನಡೆಸಬೇಕಾದರೆ ಸಿಬಿಐ ಅಧಿಕಾರಿಗಳು ರಾಜ್ಯ ಸರ್ಕಾರದ ಪೂರ್ವಾನುಮತಿ ಪಡೆದಿರಬೇಕು' ಎಂದು ನ್ಯಾ। ಎ.ಎಂ.ಖಾನ್ವಿಲ್ಕರ್ ಹಾಗೂ ಬಿ.ಆರ್. ಗವಾಯಿ ಅವರ ಪೀಠ ಉತ್ತರ ಪ್ರದೇಶದ ಪ್ರಕರಣವೊಂದರ ವಿಚಾರಣೆಯ ವೇಳೆ ಗುರುವಾರ ಆದೇಶಿಸಿದೆ.

ಇತ್ತೀಚೆಗಷ್ಟೇ ಕೇರಳ, ಮಹಾರಾಷ್ಟ್ರ, ರಾಜಸ್ಥಾನ, ಜಾರ್ಖಂಡ, ಛತ್ತೀಸ್‌ಗಢ, ಪಶ್ಚಿಮ ಬಂಗಾಳ ಮುಂತಾದ ರಾಜ್ಯ ಸರ್ಕಾರಗಳು ತಮ್ಮ ರಾಜ್ಯದ ವ್ಯಾಪ್ತಿಯಲ್ಲಿ ಸಿಬಿಐ ತನಿಖೆಗೆ ನೀಡಲಾಗಿದ್ದ 'ಜನರಲ್ ಕನ್ಸೆಂಟ್' (ಸಾಮಾನ್ಯ ಒಪ್ಪಿಗೆ) ಅನ್ನು ಹಿಂಪಡೆದಿದ್ದವು. ಆದರೆ, ಈಗಿನ ಸುಪ್ರೀಂಕೋರ್ಟ್ ಆದೇಶವು ರಾಜ್ಯ ಸರ್ಕಾರಗಳು ಸಿಬಿಐಗೆ ನೀಡಿದ್ದ ಸಾಮಾನ್ಯ ಒಪ್ಪಿಗೆಯನ್ನು ಹಿಂಪಡೆದಿದ್ದಕ್ಕೆ ಸಂಬಂಧಪಟ್ಟಿದ್ದಲ್ಲ. ಈಗಲೂ ಯಾವ್ಯಾವ ರಾಜ್ಯಗಳು ಕಾನೂನುಬದ್ಧವಾಗಿ ಸಿಬಿಐ ತನಿಖೆಗೆ ಸಾಮಾನ್ಯ ಒಪ್ಪಿಗೆ ನೀಡಿವೆಯೋ ಅಲ್ಲೆಲ್ಲ ಪ್ರತಿ ಪ್ರಕರಣದ ತನಿಖೆಗೂ ಮುನ್ನ ಸಿಬಿಐ ರಾಜ್ಯ ಸರ್ಕಾರದ ಒಪ್ಪಿಗೆ ಪಡೆಯುವ ಅಗತ್ಯವಿಲ್ಲ.

ಆದರೆ, ಸಿಬಿಐ ಎಲ್ಲಿ ಬೇಕಾದರೂ ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಬಹುದು ಎಂಬ ಜನಪ್ರಿಯ ನಂಬಿಕೆಯನ್ನು ಸುಪ್ರೀಂ ಕೋರ್ಟ್‌ನ ಆದೇಶವು ಹೋಗಲಾಡಿಸಿದೆ.